ಜಿಲ್ಲಾ ಆಸ್ಪತ್ರೆ ಇಲ್ಲದಿರುವುದು

452 (960) ಶ್ರೀ ಸಂಪಂಗಿ.ಎನ್ (ಬಾಗೇಪಲ್ಲಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಯಾವ ಕ್ರಮ ತೆಗೆದು ಕೊಳ್ಳಲಾಗಿದೆ;

ಆ) ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ 100 ಹಾಸಿಗೆಯುಳ್ಳ ಆಸ್ಪತ್ರೆ ಆಗಿರುವುದು ಮತ್ತು ಇಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಮತ್ತು ಉತ್ತಮ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

ಇ) ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಅನುದಾನ ನೀಡಲಾಗಿದೆಯೇ, ಅದರ ಪೂರ್ಣ (ಮಾಹಿತಿ ನೀಡುವುದು);

ಈ) ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ಬಡ ರೋಗಿಗಳಿಗೆ ಹಾಲು ಬ್ರೆಡ್ ಮತ್ತು ತಿಂಡಿ ನೀಡಲಾಗುತ್ತಿದೆಯೇ, ಇಲ್ಲವಾದಲ್ಲಿ ಸರ್ಕಾರದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗುವುದು;

ಉ) ಬಾಗೇಪಲ್ಲಿ ಹತ್ತಿರ ಹೆದ್ದಾರು–7 ರಲ್ಲಿ ಯಾವುದೇ ಆಸ್ಪತ್ರೆಗಳು ಇಲ್ಲದೆ ರಸ್ತೆಗಳಲ್ಲಿ ಅಪಘಾತಗಳು ಸಂಭವಿಸಿದಾಗ ತುರ್ತು ಚಿಕಿತ್ಸೆಗಾಗಿ ಗಾಯಾಳುಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಅದರ ಕುರಿತು ಪೂರ್ಣ ಮಾಹಿತಿ ನೀಡುವುದು);

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಚಿಕ್ಕಬಳ್ಳಾಪುರ 100 ಹಾಸಿಗೆಗಳ ತಾಲ್ಲೂಕು ಆಸ್ಪತ್ರೆಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾ ಆಸ್ಪತ್ರೆಯನ್ನಾಗಿ ಹಾಗೂ ಅಲ್ಲಿನ ಆಡಳಿತ ವೈದ್ಯಾಧಿಕಾರಿ ಹುದ್ದೆಯನ್ನು ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗೂ ವೈದ್ಯಕೀಯ ಅಧೀಕ್ಷಕರು ಜಿಲ್ಲಾ ಆಸ್ಪತ್ರೆ ಎಂದು ದಿನಾಂಕ: 05–11–2008 ರ ಸರ್ಕಾರಿ ಆದೇಶದಲ್ಲಿ ಮೇಲ್ದರ್ಜೆಗೇರಿಸಿದೆ.

2009–10 ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಜಿಲ್ಲಾ ಆಸ್ಪತ್ರೆ ಚಿಕ್ಕಬಳ್ಳಾಪುರದಲ್ಲಿ ಡಯಾಲಿಸಿಸ್ ಘಟಕವನ್ನು ಹಾಗೂ ಭಾರತ ಸರ್ಕಾರ ಸಹಯೋಗದೊಂದಿಗೆ "ಸುವರ್ಣ ಚತುಷ್ಪಥ ಹೆದ್ದಾರಿ" ಯೋಜನೆಯಡಿಯಲ್ಲಿ ಟ್ರಾಮಕೇರ್ ಸೆಂಟರ್‌ಗಳಿಗೆ ಮಂಜೂರಾತಿ ಮಾಡಿದ್ದು ಅವುಗಳನ್ನು ಸ್ಥಾಪಿಸುವುದಕ್ಕೆ ಪ್ರಕ್ರಿಯೆ ನಡೆಯುತ್ತಿದೆ.

ಆ) ಬಂದಿದೆ.

ಬಾಗೇಪಳ್ಳಿ ಸಾರ್ವಜನಿಕ ಆಸ್ಪತ್ರೆಯಲ್ಲಿ 7 ತಜ್ಞವೈದ್ಯರ ಹುದ್ದೆ ಮಂಜೂರಾಗಿದ್ದು 7 ತಜ್ಞವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 84 ಇತರೆ ಸಿಬ್ಬಂದಿಗಳ ಹುದ್ದೆ ಮಂಜೂರಾಗಿದ್ದು 45 ಇತರೆ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ, 39 ಇತರೆ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇವೆ.

ಗುಡಿಬಂಡೆ ಸಾರ್ವಜನಿಕ ಆಸ್ಪತ್ರೆಯಲ್ಲಿ 6 ತಜ್ಞವೈದ್ಯರ ಹುದ್ದೆ ಮಂಜೂರಾಗಿದ್ದು 6 ತಜ್ಞವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

48 ಇತರೆ ಸಿಬ್ಬಂದಿಗಳ ಹುದ್ದೆ ಮಂಜೂರಾಗಿದ್ದು 18 ಇತರೆ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ 30, ಇತರೆ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇವೆ.

ಸಾರ್ವಜನಿಕ ಆಸ್ಪತ್ರೆ ಬಾಗೇಪಲ್ಲಿಗೆ 2009–10 ನೇ ಸಾಲಿನಲ್ಲಿ ರೂ. 7,93,473/–ಗಳ ಮೌಲ್ಯದ ಭಷಧಿಗಳನ್ನು ಸರಬರಾಜು ಮಾಡಲಾಗಿದೆ.

ಸಾರ್ವಜನಿಕ ಆಸ್ಪತ್ರೆ ಗುಡಿಬಂಡೆಗೆ 2009–10ನೇ ಸಾಲಿನಲ್ಲಿ ರೂ. 4,84,813/– ಗಳ ಮೌಲ್ಯದ ಔಷಧಿಗಳನ್ನು ಸರಬರಾಜು ಮಾಡಲಾಗಿದೆ.

ಬಾಗೇಪಲ್ಲಿ ಹಾಗೂ ಗುಡಿಬಂಡೆ ಆಸ್ಪತ್ರೆಗಳ ಅಗತ್ಯಕ್ಕೆ ಅನುಗುಣವಾಗಿ ಔಷಧಿಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಇ) ರಾಜ್ಯ ಸರ್ಕಾರದ ವತಿಯಿಂದ ಯೋಜನೇತರ ಅಡಿಯಲ್ಲಿ ರೂ. 124.46 ಲಕ್ಷಗಳನ್ನು ಹಾಗೂ ಯೋಜನೆ ಅಡಿಯಲ್ಲಿ ರೂ. 121.22 ಲಕ್ಷಗಳನ್ನು ನೀಡಲಾಗಿದೆ. ಇದಲ್ಲದೇ ವಿಶೇಷ ಅಭಿವೃದ್ಧಿ ಯೋಜನೆಯಡಿ ಸುಟ್ಟ ಗಾಯಗಳ ಚಿಕಿತ್ಸಾ ಘಟಕ ಹಾಗೂ ಡಯಾಲಿಸಿಸ್ ಸೌಲಭ್ಯ ಒದಗಿಸಲು ರಾಜ್ಯದಿಂದ ರೂ. 125 ಲಕ್ಷಗಳನ್ನು ಒದಗಿಸಲಾಗಿದೆ.

ಕೇಂದ್ರ ಸರ್ಕಾರದಿಂದ ಟ್ರಾಮಾ ಕೇರ್ ಕೇಂದ್ರ ಸ್ಥಾಪನೆಗೆ ರೂ.65 ಲಕ್ಷಗಳನ್ನು ನೀಡಲಾಗಿದೆ.

ಈ) ಸದರಿ ಆಸ್ಪತ್ರೆಗಳಿಗೆ ಬಡ ರೋಗಿಗಳಿಗೆ ಹಾಲು ಮತ್ತು ಬ್ರೆಡ್ ನೀಡಲಾಗುತ್ತಿದೆ.

ಉ) ಆರೋಗ್ಯ ಕವಚ ಯೋಜನೆಯಡಿ ತುರ್ತು ಆಂಬುಲೆನ್ಸ್ ಸೌಲಭ್ಯವನ್ನು ರಾಜ್ಯ ಸರ್ಕಾರವು ಜಾರಿಗೊಳಿಸಿದ್ದು, ಬಾಗೇಪಲ್ಲಿಯಲ್ಲಿ ಸಹ ಸದರಿ ಸೌಲಭ್ಯವಿದೆ.

ಭಾರತ ಸರ್ಕಾರದ ಸಹಯೋಗದೊಂದಿಗೆ ರಾಷ್ಟ್ರೀಯ ಹೆದ್ದಾರಿ 7 ರಲ್ಲಿ ಬಾಗೇಪಲ್ಲಿಯಲ್ಲಿ ಟ್ರಾಮಕೇರ್ ಸೆಂಟರ್ ಸ್ಥಾಪಿಸಲು ಭಾರತ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಅದನ್ನು 2010–11 ರಲ್ಲಿ ಸ್ಥಾಪಿಸಲು ಉದ್ದೇಶವಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು

454 (962) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಅಲ್ಪಸಂಖ್ಯಾತರಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳ ಲಾಗಿದೆ; ಅದಕ್ಕೆ ವಿನಿಯೋಗಿಸಿದ ಹಣವೆಷ್ಟು; ಯಾವ ರೀತಿ ಅಲ್ಪ ಸಂಖ್ಯಾತರು ಅದರ ಪ್ರಯೋಜನ ಪಡೆಯುತ್ತಿದ್ದಾರೆ.

ಆ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಈ ಇಲಾಖೆಯಿಂದ ಇದುವರೆವಿಗೂ ನಿರ್ಮಾಣಗೊಂಡಿರುವ ಸಮುದಾಯ ಭವನಗಳ ಸಂಖ್ಯೆ ಎಷ್ಟು; ಅಲ್ಪ ಸಂಖ್ಯಾತರಿಗಾಗಿ ಶಾದಿಮಹಲ್‌ಗಳನ್ನು ನಿರ್ಮಿಸಲಾಗಿದೆಯೇ; ನಿರ್ಮಿಸಿದ್ದಲ್ಲಿ, ಅದರ ಖರ್ಚು ಎಷ್ಟು; ನಿರ್ಮಿಸಬೇಕಾದರೆ ಎಷ್ಟು ಹಣ ಮೀಸಲಿಡಲಾಗಿದೆ?

ಪ್ರೊ.ಡಾ. ಮುಮ್ತಾಜ್ ಅಲಿ ಖಾನ್, (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ಅಲ್ಪಸಂಖ್ಯಾತರಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಹಮ್ಮಿಕೊಂಡ ಕಾರ್ಯಕ್ರಮಗಳ ವಿವರ ಹಾಗೂ ವಿನಿಯೋಗಿಸಿದ ಹಣವದ ವಿವರವನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

2007–08 ರಲ್ಲಿ 23.59 ಲಕ್ಷ, 2008–09ನೇ ಸಾಲಿನಲ್ಲಿ ರೂ.47.03 ಲಕ್ಷ ಹಾಗೂ 2009–10ನೇ ಸಾಲಿನಲ್ಲಿ 97.46 ಲಕ್ಷಗಳನ್ನು ವಿನಿಯೋಗಿಸಲಾಗಿದೆ.